1ನೇ ಹೆಚ್ಚುವರಿ ಸಿವಿಲ್ ಜಡ್ಜ್ ಮತ್ತು ಪ್ರ.ದ.ನ್ಯಾ.ದಂ.ರವರ ನ್ಯಾಯಾಲಯ, ನಂಜನಗೂಡು

<u>ಸಿ.ಸಿ.ಸಂಖ್ಯೆ:23/2024</u>

ಪಿರ್ಯಾದಿ : ಕವಲಂದೆ ಪೋಲಿಸರು

ವಿರುದ್ಧ

ಆರೋಪಿತರು :
1. ಮಹದೇವನಾಯಕ ಉ.ಡಿಐಜಿ ಬಿನ್ ರಂಗನಾಯಕ ಉ.ಅಣ್ಣಯ್ಯನಾಯಕ 59 ವರ್ಷ
2. ವೆಂಕಟೇಶ ಬಿನ್ ಲೇಟ್ ಸಿದ್ದನಾಯಕ 50 ವರ್ಷ
3. ಪುಟ್ಟಮ್ಮ , ಕೋಂ ಮಹದೇವನಾಯಕ 45 ವರ್ಷ
4. ಮಣಿ ಉ.ಜಂಗುಮಣಿ , ಬಿನ್ ಬಸವನಾಯಕ 37 ವರ್ಷ
5. ಅನಿತಾ ಕೋಂ ಮಣಿ ಉ.ಜಂಗುಮಣಿ 32 ವರ್ಷ
6. ಶಾರದಮ್ಮ ಕೋಂ ಸಿದ್ದನಾಯಕ 48 ವರ್ಷ

ಎಲ್ಲರ ವಾಸ: ಹೆಡತಲೆ ಗ್ರಾಮ, ನಂಜನಗೂಡು ತಾ:

<u>ದೋಷಾರೋಪಣೆ</u>

ಶ್ರೀಮತಿ.ಸರಿತಾ ಕುಮಾರಿ.ಎ.ಎಂ, ಬಿ.ಎ.,ಎಲ್.ಎಲ್.ಬಿ., 1ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ನಂಜನಗೂಡು ಆದ ನಾನು ಆರೋಪಿತರಾದ ನಿಮ್ಮ ಮೇಲೆ ದೋಷಾರೋಪಿಸುವುದೇನೆಂದರೆ:-

ದಿನಾಂಕ:03.11.2023 ರಂದು ಬೆಳಗ್ಗೆ 09.30 ಗಂಟೆ ಸಮಯದಲ್ಲಿ ಕವಲಂದೆ ಪೊಲೀಸ್ ಠಾಣಾ ಸರಹದ್ದಿಗೆ ಸೇರಿದ ಹೆಡತಲೆ ಗ್ರಾಮದ ಮಹದೇವು ಬಿನ್ ಮಹದೇವನಾಯಕ ರವರ ಆರ್ ಸಿ ಸಿ ಮನೆಯ ಮೇಲೆ ಚಾಸಾ.1 ಸುರೇಶ ರವರು ನಿಂತಿದ್ದಾಗ ಆರೋಪಿತರಾದ ನೀವು ಅಪರಾಧವನ್ನು ಎಸಗುವ ಏಕೋದ್ದೇಶದಿಂದ ಅಕ್ರಮ ಗುಂಪು ಕಟ್ಟಿಕೊಂಡ ಕಾರಣ, ಭಾರತ ದಂಡ ಸಂಹಿತೆಯ ಕಲಂ 143 ಸಹವಾಚಕ 149 ರಡಿ ಶಿಕ್ಷಾರ್ಹವಾದ ಅಪರಾಧವೆಸಗಿರುವಿರೆಂದು ನಿಮ್ಮ ಮೇಲೆ ದೋಷಾರೋಪಿಸಲಾಗಿದೆ.

ಎರಡನೆಯದಾಗಿ, ಅದೇ ದಿನ, ಅದೇ ವೇಳೆ ಮತ್ತು ಅದೇ ಸ್ಥಳದಲ್ಲಿ, ಆರೋಪಿತರಾದ ನೀವು ಅಪರಾಧವನ್ನು ಎಸಗುವ ಏಕೋದ್ದೇಶದಿಂದ ಅಕ್ರಮ ಗುಂಪು ಕಟ್ಟಿಕೊಂಡು ಕೂಗಾಡಿಕೊಂಡು ದಾಂದಲೆ ಮಾಡಿದ ಕಾರಣ, ಭಾರತ ದಂಡ ಸಂಹಿತೆಯ ಕಲಂ 147 ಸಹವಾಚಕ 149 ರಡಿ ಶಿಕ್ಷಾರ್ಹವಾದ ಅಪರಾಧವೆಸಗಿರುವಿರೆಂದು ನಿಮ್ಮ ಮೇಲೆ ದೋಷಾರೋಪಿಸಲಾಗಿದೆ.

ಮೂರನೆಯದಾಗಿ, ಅದೇ ದಿನ, ಅದೇ ವೇಳೆ ಮತ್ತು ಅದೇ ಸ್ಥಳದಲ್ಲಿ, ಆರೋಪಿತರಾದ ನೀವು ಅಪರಾಧವನ್ನು ಎಸಗುವ ಏಕೋದ್ದೇಶದಿಂದ ಅಕ್ರಮ ಗುಂಪು ಕಟ್ಟಿಕೊಂಡು ಕೈಯಲ್ಲಿ ಅಪಾಯಕರ ಆಯುಧಗಳನ್ನು ಹೊಂದಿದ್ದ ಕಾರಣ, ಭಾರತ ದಂಡ ಸಂಹಿತೆಯ ಕಲಂ 148 ಸಹವಾಚಕ 149 ರಡಿ ಶಿಕ್ಷಾರ್ಹವಾದ ಅಪರಾಧವೆಸಗಿರುವಿರೆಂದು ನಿಮ್ಮ ಮೇಲೆ ದೋಷಾರೋಪಿಸಲಾಗಿದೆ.

ನಾಲ್ಕನೆಯದಾಗಿ, ಅದೇ ದಿನ, ಅದೇ ವೇಳೆ ಮತ್ತು ಅದೇ ಸ್ಥಳದಲ್ಲಿ, ಆರೋಪಿತರಾದ ನೀವು ಅಪರಾಧವನ್ನು ಎಸಗುವ ಏಕೋದ್ದೇಶದಿಂದ ಅಕ್ರಮ ಗುಂಪು ಕಟ್ಟಿಕೊಂಡು ಬಂದು, ಚಾಸಾ.1 ರವರ ಪಿತ್ರಾರ್ಜಿತ ಆಸ್ತಿಯಲ್ಲಿ ಮನೆ ಕಟ್ಟುತ್ತಿದ್ದು, ಇದನ್ನು ಪ್ರಶ್ನಿಸಿದ ಚಾಸಾ.1 ರವರಿಗೆ 1 ನೇ ಆರೋಪಿತರಾದ ನೀವು ಕಬ್ಬಿಣದ ಸರಳಿನಿಂದ ಚಾಸಾ.1 ರವರ ಮೊಣಕೈನ ಭಾಗಕ್ಕೆ ಹೊಡೆದಿರುತ್ತೀರಿ ಮತ್ತು 2 ನೇ ಆರೋಪಿತರಾದ ನೀವು ಚಾಸಾ.1 ರವರಿಗೆ ದೊಣ್ಣೆಯಿಂದ ಬಲಕೈಗೆ ಹೊಡೆದು ಸಾಮಾನ್ಯ ಸ್ವರೂಪದ ಗಾಯಪಡಿಸಿರುತ್ತೀರಿ. ಆದ್ದರಿಂದ ಆರೋಪಿತರಾದ ನೀವು ಭಾರತ ದಂಡ ಸಂಹಿತೆಯ ಕಲಂ.323 ಸಹವಾಚಕ ಕಲಂ.149 ರಡಿ ಶಿಕ್ಷಾರ್ಹವಾದ ಅಪರಾಧವೆಸಗಿರುವಿರೆಂದು ನಿಮ್ಮ ಮೇಲೆ ದೋಷಾರೋಪಿಸಲಾಗಿದೆ.

ಕೊನೆಯದಾಗಿ, ಅದೇ ದಿನ, ಅದೇ ವೇಳೆ ಮತ್ತು ಅದೇ ಸ್ಥಳದಲ್ಲಿ, ಆರೋಪಿತರಾದ ನೀವು ಅಪರಾಧವನ್ನು ಎಸಗುವ ಏಕೋದ್ದೇಶದಿಂದ ಅಕ್ರಮ ಗುಂಪು ಕಟ್ಟಿಕೊಂಡು ಬಂದು, ಆ ಪೈಕಿ 3 ರಿಂದ 6 ನೇ ಆರೋಪಿತರಾದ ನೀವು ಚಾಸಾ.1 ರವರಿಗೆ ಕೊಲೆ ಬೆದರಿಕೆ ಹಾಕಿ ಅಪರಾಧಿಕ ಭಯೋತ್ಪಾದನೆಯನ್ನು ಎಸಗಿರುತ್ತೀರಿ. ಆದ್ದರಿಂದ ಆರೋಪಿತರಾದ ನೀವು ಭಾರತ ದಂಡ ಸಂಹಿತೆ ಕಲಂ.506 ಸಹವಾಚಕ ಕಲಂ.149 ರಡಿ ಶಿಕ್ಷಾರ್ಹವಾದ ಅಪರಾಧವೆಸಗಿರುವಿರೆಂದು ನಿಮ್ಮ ಮೇಲೆ ದೋಷಾರೋಪಿಸಲಾಗಿದೆ.

(ಮೇಲ್ಕಂಡ ಆರೋಪವನ್ನು ಆರೋಪಿಗೆ ಓದಿ ಹೇಳಿ ಕೇಳಲಾಯಿತು. ಆರೋಪಿ ಕೊಟ್ಟ ಉತ್ತರವನ್ನು ಅವರು ಉತ್ತರಿಸಿದಂತೆಯೇ ಬರೆದುಕೊಂಡಿದ್ದು ಸಂಪೂರ್ಣ ಹಾಗೂ ಸರಿಯಾದ ಮಾಹಿತಿಯನ್ನು ಒಳಗೊಂಡಿದೆ ಎಂದು ದಿನಾಂಕ 25.06.2025 ರಂದು ತೆರೆದ ನ್ಯಾಯಾಲಯದಲ್ಲಿ ದೃಢೀಕರಿಸಿರುತ್ತೇನೆ.)

1 ನೇ ಹೆ ಸಿ.ಜೆ. ಮತ್ತು ಜೆ.ಎಂ.ಎಫ್.ಸಿ.
ನಂಜನಗೂಡು

1 ನೇ ಹೆಚ್ಚುವರಿ ಸಿವಿಲ್ ಜಡ್ಜ್ ಮತ್ತು ಪ್ರ.ದ.ನ್ಯಾ.ದಂ.ರವರ ನ್ಯಾಯಾಲಯ, ನಂಜನಗೂಡು

<u>ಸಿ.ಸಿ.ಸಂಖ್ಯೆ:23/2024</u>

**ಪಿರ್ಯಾದಿ** : ಕವಲಂದೆ ಪೋಲಿಸರು

ವಿರುದ್ಧ

**ಆರೋಪಿತರು** :

1. ಮಹದೇವನಾಯಕ ಉ.ಡಿಐಜಿ ಬಿನ್ ರಂಗನಾಯಕ ಉ.ಅಣ್ಣಯ್ಯನಾಯಕ 59 ವರ್ಷ
2. ವೆಂಕಟೇಶ ಬಿನ್ ಲೇಟ್ ಸಿದ್ದನಾಯಕ 50 ವರ್ಷ
3. ಪುಟ್ಟಮ್ಮ ಕೋಂ ಮಹದೇವನಾಯಕ 45 ವರ್ಷ
4. ಮಣಿ ಉ.ಜಂಗುಮಣಿ ಬಿನ್ ಬಸವನಾಯಕ 37 ವರ್ಷ
5. ಅನಿತಾ ಕೋಂ ಮಣಿ ಉ.ಜಂಗುಮಣಿ 32 ವರ್ಷ
6. ಶಾರದಮ್ಮ ಕೋಂ ಸಿದ್ದನಾಯಕ 48 ವರ್ಷ

ಎಲ್ಲರ ವಾಸ: ಹೆಡತಲೆ ಗ್ರಾಮ, ನಂಜನಗೂಡು ತಾ:

: ಆಪಾದನೆ :

ಪ್ರಶ್ನೆ-1 : ಮೇಲ್ಕಂಡ ಎಲ್ಲಾ ಆಪಾದನೆಗಳನ್ನು ಓದಿ ಹೇಳಿದ್ದು ಅರ್ಥವಾಯಿತೇ ?
ಉತ್ತರ :

ಪ್ರಶ್ನೆ-2 : ಸದರೀ ಆಪಾದನೆಗಳನ್ನು ಒಪ್ಪಿಕೊಳ್ಳುವೆಯಾ ಅಥವಾ ವಿಚಾರಣೆಯಾಗಬೇಕೋ?
ಉತ್ತರ :

(ಮೇಲ್ಕಂಡ ಎಲ್ಲಾ ಆಪಾದನೆಗಳನ್ನು ನನ್ನ ಸಮಕ್ಷಮ ಓದಿ ಹೇಳಿ ಆರೋಪಿತರ ಹೇಳಿಕೆಯನ್ನು ಪಡೆದುಕೊಂಡು ಸತ್ಯವಾಗಿದೆ ಎಂದು ದೃಢೀಕರಿಸಲಾಗಿದೆ.)

1 ನೇ ಹೆ ಸಿ.ಜೆ. ಮತ್ತು ಜೆ.ಎಂ.ಎಫ್.ಸಿ.
**ನಂಜನಗೂಡು**